ಶ್ರೀ ಕೆ.ಜೆ. ಜಾರ್ಜ್ (ಗೃಹ ಸಚಿವರು)

ಅ) ಹೌದು

ಆ) ಇದನ್ನು ನಿಯಂತ್ರಿಸಲು ಆಂತರಿಕ ಭದ್ರತಾ ವಿಭಾಗ (Internal Security Division) ವತಿಯಿಂದ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಐ.ಟಿ.ಪಿ.ಎಲ್ ಮತ್ತು ಎಲೆಕ್ಟ್ರಾನಿಕ್ ಸಿಟಿಯಲ್ಲಿರುವ ಅತಿ ಪ್ರಮುಖ ಸ್ಥಾವರಗಳ ಬಳಿ ಈ ವರ್ಷದಲ್ಲಿ ಸುಮಾರು ಒಂಬತ್ತು ಬಾರಿ ಆಂತರಿಕ ಭದ್ರತಾ ವಿಭಾಗದ C.C.T.(Center for Counter Terrorism) ವತಿಯಿಂದ ರೆಖಿ (Recee) ಮಾಡಿ ಅಣುಕು ಪ್ರದರ್ಶನ (Mock Drill) ಮಾಡಿ ಭಯೋತ್ಪಾದನೆಯ ಬಗ್ಗೆ ಜಾಗೃತಿ ಮೂಡಿಸಲಾಗಿರುತ್ತದೆ, ಭಯೋತ್ಪಾದನೆಯ ಬಗ್ಗೆ ಕರ್ನಾಟಕ ರಾಜ್ಯ ಮತ್ತು ಇತರೆ ರಾಜ್ಯಗಳಲ್ಲಿ ದಸ್ತಗಿರಿಯಾಗಿರುವ ಆರೋಪಿಗಳನ್ನು ವಿಚಾರಣೆ ಮಾಡಿ ಅವರ ಚಟುವಟಿಕೆಗಳ ಬಗ್ಗೆ ಮಾಹಿತಿ ಸಂಗ್ರಹಿಸಲಾಗಿದೆ. ಈ ಬಗ್ಗೆ ಮುಂಜಾಗ್ರತಾ ಕ್ರಮವಹಿಸಲಾಗುತ್ತಿದೆ.

ವಾಹನಗಳ ಸಂಚಾರಿ ದಟ್ಟಣೆ ಹೆಚ್ಚಾಗಿರುವುದು

13 (122); ಶ್ರೀ ಅರವಿಂದ ಲಿಂಬಾವಳಿ (ಮಹದೇವಪುರ)

ಅ) ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ವ್ಯಾಪ್ತಿಯಲ್ಲಿ ವಾಹನಗಳ ಸಂಚಾರಿ ದಟ್ಟಣೆ ಹೆಚ್ಚಾಗಿದ್ದು ಇದನ್ನು ನಿಯಂತ್ರಿಸಲು ಸಂಚಾರಿ ಪೊಲೀಸ್ ಸಿಬ್ಬಂದಿಯ ಕೊರತೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಹಾಗಿದಲ್ಲಿ, ಸಂಚಾರಿ ದಟ್ಟಣೆಯನ್ನು ನಿಯಂತ್ರಿಸಲು ಹಾಗೂ ಕೊರತೆ ಇರುವ ಸಿಬ್ಬಂದಿ ನೇಮಕಾತಿ ಮಾಡಲು ಯಾವ ಕ್ರಮ ಕೈಗೊಳ್ಳಲಾಗುವುದು

ಇ) ಮುಖ್ಯ ರಸ್ತೆಯನ್ನು ಹೊರತುಪಡಿಸಿ ವಸತಿ ಪ್ರದೇಶದ ರಸ್ತೆಗಳಲ್ಲೂ ಸಹ ದಿನದ ಅವಧಿಯಲ್ಲಿ ಭಾರಿ ವಾಹನಗಳು ಸಂಚರಿಸುತ್ತಿದ್ದು ಇವುಗಳನ್ನು ನಿಯಂತ್ರಿಸಲು ಕೈಗೊಂಡಿರುವ ಕ್ರಮಗಳೇನು?

ಶ್ರೀ ಕೆ.ಜೆ. ಜಾರ್ಜ್ (ಮಾನ್ಯ ಗೃಹ ಸಚಿವರು)

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ಪೊಲೀಸ್ ಸಿಬ್ಬಂದಿಗಳ ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. ಪ್ರಕ್ರಿಯೆ ಪೂರ್ಣಗೊಂಡ ಕೂಡಲೇ ಕೊರತೆ ಇರುವ ಸಿಬ್ಬಂದಿ ನೇಮಕಾತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಇ) ವಸತಿ ಪ್ರದೇಶದ ರಸ್ತೆಗಳಲ್ಲಿ ಭಾರಿ ವಾಹನಗಳು ಪೀಕ್ ಅವರ್ಸ್ ಹೊರತುಪಡಿಸಿ ಅಂದರೆ ಬೆಳಿಗ್ಗೆ 11:00 ಗಂಟೆಯಿಂದ ಸಂಜೆ 04:00 ಗಂಟೆಯವರೆಗೆ ಮತ್ತು ರಾತ್ರಿ 10:00 ಗಂಟೆಯಿಂದ ಬೆಳಿಗ್ಗೆ 07:00 ಗಂಟೆಯವರೆಗೆ ಸಂಚರಿಸಲು ಅನುವು ಮಾಡಿಕೊಡಲಾಗಿದೆ. ಉಳಿದ ವೇಳೆಗಳಲ್ಲಿ ಭಾರಿ ವಾಹನಗಳ ಪ್ರವೇಶವನ್ನು ನಿರ್ಬಂಧಿಸಲಾಗಿರುತ್ತದೆ. ಹಾಗೂ ಸಂಚರಿಸಿದ ಪಕ್ಷದಲ್ಲಿ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುವುದು.

ಖಾಸಗಿಯವರ ಜಮೀನಿನಲ್ಲಿ ಸಾರ್ವಜನಿಕರ ಉದ್ದೇಶಕ್ಕೆ ರಸ್ತೆಯನ್ನು ಅಗಲೀಕರಿಸುವುದು

14 (123); ಶ್ರೀ ಅರವಿಂದ ಲಿಂಬಾವಳಿ (ಮಹದೇವಪುರ)

ಅ) ಖಾಸಗಿಯವರ ಜಮೀನಿನಲ್ಲಿ ಸಾರ್ವಜನಿಕರ ಉದ್ದೇಶಕ್ಕೆ ರಸ್ತೆಯನ್ನು ಅಗಲೀಕರಿಸಲು ಟಿ.ಡಿ.ಆರ್. ನೀಡುವಾಗ ಬಹಳಷ್ಟು ಷರತ್ತುಗಳನ್ನು ವಿಧಿಸಿರುವುದರಿಂದ ಜಮೀನನ್ನು ಬಿಟ್ಟುಕೊಡುವ ಮಾಲಿಕರಿಗೆ ಅನಾನುಕೂಲ ಹಾಗೂ ಇದರಲ್ಲಿ ಭ್ರಷ್ಟಾಚಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;